ಮಹಾರಾಜನೆಂದು ನಿರ್ಧರಿಸುತ್ತಾರೆ. ಇಂದ್ರ ಪದವಿಗೆ ಏರಿದ ನಂತರ ತನ್ನಲ್ಲುಂಟಾದ ಅಪಾರ ಶಕ್ತಿ ಮತ್ತು ಅಪರಿಮಿತ ಅಧಿಕಾರದಿಂದ ನಹುಷನಿಗೆ ಅಹಂಕಾರವುಂಟಾಗಿ ಇಂದ್ರಪತ್ನಿ ಶಚೀದೇವಿಯನ್ನು ಕಾಣಲು ಬಯಸುತ್ತಾನೆ. ಅವಳು ಹೇಗಾದರೂ ಈ ಸಂಕಷ್ಟದಿಂದ ಪಾರಾಗಲು ಸಪ್ತ ಋಷಿಗಳಿಂದ ಹೊರಲ್ಪಟ್ಟ ಪಲ್ಲಕ್ಕಿಯಲ್ಲಿ ತನ್ನನ್ನು ಕಾಣಲು ಬರಬೇಕೆಂದು ಷರತ್ತನ್ನು ಹಾಕುತ್ತಾಳೆ. ಹಾಗೆಯೇ ಹೋಗುವಾಗ ಸಪ್ತಋಷಿಗಳಲ್ಲಿ ಒಬ್ಬರಾದ ಕುಬ್ಜರಾಗಿದ್ದ ಅಗಸ್ತ್ಯ ಋಷಿಯ ಮಂದಗತಿಯಿಂದ ಬೇಸರಪಟ್ಟ ನಹುಷನು 'ಸರ್ಪಿಸರ್ಪಿ(ಬೇಗಬೇಗ)' ಎಂದು ಅವರನ್ನು ಕಾಲಿನಿಂದ ತಿವಿದು ಆತುರ ಪಡಿಸುತ್ತಾನೆ. ಇದರಿಂದ ಕುಪಿತರಾದ ಅಗಸ್ತ್ಯರು 'ಸರ್ಪೋದ್ಭವ' ಎಂದು ಶಪಿಸುತ್ತಾರೆ. ನಂತರ ನಹುಷನು ಹೆಬ್ಬಾವಾಗಿ ಭೂಲೋಕವನ್ನು ಸೇರುತ್ತಾನೆ' ಎಂದು ಅಣ್ಣ ಕಥೆ ಮುಗಿಸುವಷ್ಟರಲ್ಲಿಯೇ 'ಅದಕ್ಕೇ ಹೇಳೊದು ಆತುರಗಾರನಿಗೆ ಬುದ್ಧಿ ಮಟ್ಟ ಅಂತ' ಎಂದು ಅಜ್ಜಿ ಕಥೆಯ ಸಾರಾಂಶ ನೀಡಿ ಪರಿಸಮಾಪ್ತಿಗೊಳಿಸುತ್ತಿದ್ದರು.

ನಮ್ಮತ್ತೆಯ ಭವಿಷ್ಯವಾಣಿಯು ನಾನು ಶಾಲೆಗೆ ಸೇರಿದಾಗಿನಿಂದಲೇ ನಾಂದಿಗೆ ಚಾಲ್ತಿಯಿಟ್ಟಿತು. ಆ ಕಾಲದಲ್ಲಿ ಪ್ರಾಥಮಿಕ ಶಾಲೆಯೂ ನಮ್ಮೂರಿನಲ್ಲಿ ಇಲ್ಲದಿದ್ದರಿಂದ ಎರಡೂವರೆ ಮೈಲಿ ದೂರವಿದ್ದ ಪಕ್ಕದೂರಿನ ಸ್ಕೂಲಿಗೆ ನಾನು, ಅಕ್ಕ ಮತ್ತು ತಮ್ಮ ಮೂವರನ್ನೂ ಒಟ್ಟಾಗಿಯೇ ಸೇರಿಸಿ ಕಳಿಸಲಾರಂಭಿಸಿದರು. ದಿನವೂ ನಮ್ಮಕ್ಕ ನಮ್ಮಿಬ್ಬರನ್ನೂ 'ಪ್ರೇಯರ್‌ಗೆ ಲೇಟಾಗುತ್ತೆ' ಅಂತ ಕೈಹಿಡಿದು ದರದರನೆ ಎಳೆದುಕೊಂಡು ಹೋದರೂ ಆಗಲೇ ಪ್ರೇಯರ್ ಮುಗಿದೇ ಬಿಟ್ಟಿರುತ್ತಿದ್ದರಿಂದ ಲೇಟ್ ಲತೀಫ್‌ಗಳಾದ ನಮ್ಮನ್ನೆಲ್ಲಾ ಒಂದು ಸಾಲಲ್ಲಿ ನಿಲ್ಲಿಸಿ ಬೆತ್ತದ ಸೇವೆ ಮಾಡಿಯೇ ಒಳಗೆ ಕಳಿಸುತ್ತಿದ್ದರು. ಮಾಸ್ತರಿಗೆ ಚಿಕ್ಕವರೆಡನ್ನೂ ಕರೆದುಕೊಂಡು ಬರಬೇಕಾದ ಅಕ್ಕನ ಜವಾಬ್ದಾರಿಯ ಅರಿವಿದ್ದರಿಂದ ಅವಳಿಗೆ ಹಾಗೂ ಮುದ್ದಾಗಿದ್ದ ತಮ್ಮನಿಗೆ ಮಾಫಿ ಸಿಗುತ್ತಿತ್ತು. ಆದರೆ, ನನ್ನ ಮುಖ ನೋಡಿದಾಕ್ಷಣವೇ ಅವರಿಗೇನನಿಸುತ್ತಿತ್ತೋ ಏನೋ 'ಬೇಗಬೇಗ ಬರಕ್ಕೇನು ದಾಡಿ' ಎಂದು ಒಂದು ಬಾರಿಸಿಯೇ ಮುಂದೆ ಕಳಿಸುತ್ತಿದ್ದರು. ನನ್ನ ಕನಸಿನ ಶಾಲೆಯಲ್ಲಿ ದಿನವೂ ನನಗೆ ಸಿಗುತ್ತಿದ್ದ ಇಂಥಾ ಸ್ವಾಗತದಿಂದ ಬೇಸತ್ತ ನಾನು, 'ಸ್ಕೂಲಿಗೆ ಹೋಗೋದೇ ಇಲ್ಲ' ಎಂದು ಅಳುತ್ತಾ ಕೂತಾಗ, ನಮ್ಮತ್ತೆಯೇ ರೌದ್ರಾವತಾರದಲ್ಲಿ ಸ್ಕೂಲಿಗೆ ಬಂದು 'ಯಾವೋನವನು ಮೇಷ್ಟ್ರು ನನ್ನ ಕಂದನ್ನ ಹೊಡೆದೋನು?' ಎಂದು ಅಬ್ಬರಿಸಿದಾಗ, ನಮ್ಮತ್ತೆಯ ವೀರಾವೇಶದ ಪರಿಚಯವಿದ್ದ ಮೇಷ್ಟ್ರು ಇನ್ನೆಲ್ಲಿ ತಮ್ಮ ಕೆಲಸಕ್ಕೇ ಸಂಚಕಾರ ಬರುತ್ತೋ ಎಂದು ಹೆದರಿ 'ಕ್ಷಮಿಸಿ ತಾಯಿ, ಇನ್ನಾವತ್ತೂ ನಿಮ್ಮ ಮಗೂನ ಹೊಡೆಯಲ್ಲ' ಎಂದು ಅ ನಾಮತ್ತಾಗಿ ನಮ್ಮತ್ತೆಯ ಕಾಲಿಗೇ ಬಿದ್ದಿದ್ದರಿಂದ ನಾನು ಆ ಕುತ್ತಿನಿಂದ ಪಾರಾಗುವಂತಾಯ್ತು ಹಾಗೂ ಅಕ್ಷರಸ್ಥರ ಸಾಲಿಗೂ ಸೇರುವಂತಾಯ್ತು!

ನಮ್ಮ ಸ್ಕೂಲ್‌ನ ಸುತ್ತಾ ಕಡಲೇಕಾಯಿ ಬೆಳೆಯೋ ಹೊಲಗಳೇ ಹೆಚ್ಚಾಗಿದ್ದುದರಿಂದ ಆಗಾಗ ಹೆಣ್ಣುಮಕ್ಕಳಿಗೆ ಕಡಲೇಕಾಯಿ ಸುಲಿಯೋ ಸ್ಪರ್ಧೆ ಮಾಡ್ತಿದ್ದರು. ನನ್ನ ಜೊತೆಯಲ್ಲಿದ್ದವರು ಎರಡೆರಡು ಕೈಲೂ ಸರಸರನೆ ಸುಲಿದು ಬೇಗ ಮುಗಿಸಿ ಬಹುಮಾನಕ್ಕಾಗಿ ಸೆಣಸುತ್ತಿದ್ದರು. ನಾನು ಒಂದೊಂದು ಕಾಯನ್ನೂ ನೆಲಕ್ಕೆ ಕುಟ್ಟಿ ಕುಯ್ಯೋಮರ್ರೊ ಎಂದು ಬಿಡಿಸುವುದು ನೋಡಿ ಅವರೆಲ್ಲಾ ಗೇಲಿ ಮಾಡಿಕೊಂಡು

